# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1438 |
| 2 | ಸದಸ್ಯರ ಹೆಸರು | : | ಶ್ರೀ ಎಸ್ ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 10-03-2022 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಪ್ರಶ್ನೆ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | 2021ನೇ ಸಾಲಿನಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್(ಸಿವಿಲ್) ಹುದ್ದೆಗಳ ನೇಮಕಾತಿಗಾಗಿ ಎಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ; ಇದರಲ್ಲಿ ದೈಹಿಕ ಪರೀಕ್ಷೆಯಲ್ಲಿ ಪಾಸಾದ ಎಷ್ಟು ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದಿರುತ್ತಾರೆ; (ಮಾಹಿತಿ ನೀಡುವುದು) | 2021ನೇ ಸಾಲಿನಲ್ಲಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ ಸಲುವಾಗಿ 1,28,598 ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಿರುತ್ತಾರೆ.<br><br>ದೈಹಿಕ ಪರೀಕ್ಷೆಯಲ್ಲಿ ಅರ್ಹರಾದ 54,104 ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದಿರುತ್ತಾರೆ. |
| (ಆ) | ಈ ನೇಮಕಾತಿಗೆ ಆಯ್ಕೆ ಮಾಡಲಾದ ಪರೀಕ್ಷಾ ಕೇಂದ್ರಗಳೆಷ್ಟು; ಈ ಕೇಂದ್ರಗಳಲ್ಲಿ ಎಷ್ಟು ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದಾರೆ;(ಕೇಂದ್ರಾವಾರು ಫಲಿತಾಂಶಗಳ ವಿವರ ನೀಡುವುದು) | ಸದರಿ ನೇಮಕಾತಿಗೆ ಈ ಕೆಳಕಂಡ 07 ಜಿಲ್ಲೆ / ನಗರಗಳ ಪರೀಕ್ಷಾ ಕೇಂದ್ರಗಳನ್ನು ಆಯ್ಕೆ ಮಾಡಲಾಗಿರುತ್ತದೆ. ಅಭ್ಯರ್ಥಿಗಳ ಸಂಖ್ಯೆ ಮತ್ತು ಫಲಿತಾಂಶದ ವಿವರ ಈ ಕೆಳಗಿನಂತೆ ನೀಡಲಾಗಿದೆ. |

| ಪರೀಕ್ಷಾ ಕೇಂದ್ರ | ಅಭ್ಯರ್ಥಿಗಳ ಸಂಖ್ಯೆ | ಆಯ್ಕೆಯಾದ ಅಭ್ಯರ್ಥಿಗಳ ಸಂಖ್ಯೆ |
|---|---|---|
| ಬೆಂಗಳೂರು ನಗರ | 13,315 | 172 |
| ದಾವಣಗೆರೆ | 7,528 | 76 |
| ಹುಬ್ಬಳ್ಳಿ-ಧಾರವಾಡ ನಗರ | 7,760 | 69 |
| ಕಲಬುರಗಿ ನಗರ | 8,675 | 93 |
| ಮಂಗಳೂರು ನಗರ | 5,369 | 42 |
| ಮೈಸೂರು ನಗರ | 5,575 | 37 |
| ತುಮಕೂರು | 5,882 | 56 |
| **ಒಟ್ಟು** | **54,104** | **545** |

| ಪ್ರಶ್ನೆ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಇ) | ಈ ನೇಮಕಾತಿಯಲ್ಲಿ ಅಕ್ರಮಗಳು ನಡೆದಿವೆಯೆಂದು ಅಭ್ಯರ್ಥಿಗಳಿಂದ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಎಷ್ಟು ದೂರುಗಳು ಸ್ವೀಕೃತವಾಗಿವೆ ಮತ್ತು ಈ ದೂರುಗಳ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ಸಂಪೂರ್ಣ ವಿವರ ನೀಡುವುದು) | ನೇಮಕಾತಿಯಲ್ಲಿ ಅಕ್ರಮಗಳು ನಡೆದಿವೆ ಎಂದು 05 ಅಭ್ಯರ್ಥಿಗಳು ದೂರುಗಳನ್ನು ಸಲ್ಲಿಸಿರುತ್ತಾರೆ. ಸದರಿ ದೂರುಗಳಲ್ಲಿನ ಅಂಶಗಳ ಬಗ್ಗೆ ಹಿರಿಯ ಅಧಿಕಾರಿಗಳು ಪರಿಶೀಲಿಸಿದ್ದು, ಆಯ್ಕೆಯಾದ ಅಭ್ಯರ್ಥಿಗಳು ಅವರುಗಳ ಅರ್ಹತೆಯ ಮೇಲೆ ಅಂಕಗಳನ್ನು ಪಡೆದಿರುವುದು ಕಂಡುಬಂದಿರುತ್ತದೆ. ಹೀಗಾಗಿ ದೂರು ಅರ್ಜಿಗಳಲ್ಲಿ ತಿಳಿಸಿರುವಂತೆ ಯಾವುದೇ ಅಕ್ರಮಗಳು ನಡೆದಿರುವುದಿಲ್ಲ.<br>ಪೊಲೀಸ್ ಇಲಾಖೆಯ 545 ಪಿ.ಎಸ್.ಐ ಹುದ್ದೆಗಳ ನೇಮಕಾತಿ ಸಂಬಂಧಿಸಿದಂತೆ ದಿನಾಂಕ: 19.01.2022 ರಂದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಕಲ್ಯಾಣ ಕರ್ನಾಟಕ ಪ್ರದೇಶದ ಕೆಲವು ಅಭ್ಯರ್ಥಿಗಳು ಹಾಗೂ ಇತರರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ / ಮನವಿಗಳು ಸ್ವೀಕೃತವಾದ ಹಿನ್ನಲೆಯಲ್ಲಿ 545 ಪೊಲೀಸ್ |

| | | |
|---|---|---|
| | | ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪರಿಶೀಲಿಸಲು ಸರ್ಕಾರದ ಆದೇಶ ಸಂಖ್ಯೆ: ಒಇ 21 ಪಿಇಐ 2022, ದಿನಾಂಕ: 15.02.2022ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು 545 ಪಿ.ಎಸ್.ಐ ಹುದ್ದೆಯ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿಆಸು ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳನ್ವಯ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗಿದೆಯೇ? ಎಂಬ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ಸಮಿತಿಯ ವರದಿ ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿ ಇರುತ್ತದೆ. |

ಸಂಖ್ಯೆ: ಒಇ 44 ಪಿಇಐ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು